RNU AIR DHARWAD

# FEBRUARY 7,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬದ ಸದಸ್ಯರ ವಿರುದ್ಧದ, ಮುಡಾ ನಿವೇಶನ ಅಕ್ರಮ ಹಂಚಿಕೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಿ, ಸಲ್ಲಿಸಲಾಗಿದ್ದ ಅರ್ಜಿಯ ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ, ಧಾರವಾಡ ಹೈಕೋರ್ಟಿನ ಏಕಸದಸ್ಯ ಪೀಠ, ಮುಡಾ ಪ್ರಕರಣವನ್ನು ಸಿಬಿಐಗೆ ವಹಿಸಲು ನಿರಾಕರಿಸಿದೆ, ಲೋಕಾಯುಕ್ತ ಸ್ವತಂತ್ರ ತನಿಖಾ ಸಂಸ್ಥೆಯಾಗಿದ್ದು, ವಿಚಾರಣೆ ಮುಂದುವರಿಸಬಹುದು ಎಂದು ಆದೇಶಿಸಿದೆ. ದೂರುದಾರ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ಅರ್ಜಿಯನ್ನು ರದ್ದುಪಡಿಸಿದೆ.**

<><><>

**ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ತಮ್ಮ ವಿರುದ್ಧದ ಪೋಕ್ಸೋ ಪ್ರಕರಣ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯ ಕುರಿತು ತೀರ್ಪು ಪ್ರಕಟಿಸಿದ, ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ, ಧಾರವಾಡ ಹೈಕೋರ್ಟ್ ನ ಏಕ ಸದಸ್ಯ ಪೀಠ, ನಿರೀಕ್ಷಣಾ ಜಾಮೀನು ಮಂಜೂರು ಮಾಡಿ, ಪ್ರಕರಣ ರದ್ದು ಪಡಿಸಲು ನಿರಾಕರಿಸಿತು.**

<><><>

**ಹಣಕಾಸು ಖಾತೆಯನ್ನೂ ಹೊಂದಿರುವ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 2025–26ನೇ ಸಾಲಿನ ಮುಂಗಡಪತ್ರದ ಮಂಡನೆಗಾಗಿ, ಇಲಾಖಾವಾರು ಆಯವ್ಯಯ ಆದ್ಯತಾ ಪಟ್ಟಿ ಪಡೆದು, ಪೂರ್ವಭಾವಿ ಸಭೆಗಳನ್ನು ಆರಂಭಿಸಿದ್ದಾರೆ.**

**ಬೆಂಗಳೂರಿನ ಮುಖ್ಯಮಂತ್ರಿಯವರ ಕಾವೇರಿ ನಿವಾಸದಲ್ಲಿ, ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು. ಮೊದಲ ದಿನವಾದ ನಿನ್ನೆ, ಬೆಳಗಿನ ಅವಧಿಯಲ್ಲಿ, ಒಳಾಡಳಿತ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ, ಸಣ್ಣ ಕೈಗಾರಿಕೆ, ಇಂಧನ, ಲೋಕೋಪಯೋಗಿ ಮತ್ತು ಕಾರ್ಮಿಕ ಇಲಾಖೆ ಸಭೆ ನಡೆಸಿದರು. ಮಧ್ಯಾಹ್ನದ ಬಳಿಕ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಆಹಾರ ಮತ್ತು ನಾಗರಿಕ ಸರಬರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಹಕಾರ, ರೇಷ್ಮೆ ಹಾಗೂ ಪಶು ಸಂಗೋಪನಾ ಇಲಾಖೆಗಳ ಅಭಿವೃದ್ಧಿ ಯೋಜನೆಗಳ ಪ್ರಸ್ತುತ ಸ್ಥಿತಿಗತಿಯ ಪರಾಮರ್ಶೆ ನಡೆಸಿದರು.**

<><><>

ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕು ಮಲಗುಂದ ಗ್ರಾಮದಲ್ಲಿ ಶಾಸನ ಇರುವ ವಿಶೇ ’ ಗರುಡನಂದಿಗರಿಗೆ ಪತ್ತೆಯಾಗಿದೆ. ಶಿ ್ಟ ಶಿಲೆಯಲ್ಲಿ ನಿರ್ಮಿತ ಈ ಕಂಬದ ಮೇಲ್ಭಾಗದಲ್ಲಿ ಪಶ್ಚಿಮಾಭಿಮುಖವಾಗಿ ನಂದಿಯ ವಿಗ್ರಹವನ್ನು ಸ್ಥಾಪಿಸಲಾಗಿದೆ. ಧರ್ಮ ಸಮನ್ವಯದ ಪ್ರತೀಕವಾದ ಈ ಶಿಲ್ಪದ ಈ ಬಗ್ಗೆ ಕಮಲಾಪುರ ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ನಿರ್ದೇಶಕ ಡಾಕ್ಟರ್ ಆರ್.ಶೇಜೇಶ್ವರ ಪ್ರದೇಶ ಸಮಾಚಾರಕ್ಕೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

ಧ್ವನಿ: ಡಾಕ್ಟರ್ ಆರ್. ಶೇಜೇಶ್ವರ 32 ಸೆಕೆಂದುಗಳು

<><><>

‘ಏರೋ ಇಂಡಿಯಾ 2025’ ಪ್ರದರ್ಶನಕ್ಕೆ, ಬೆಂಗಳೂರಿನ ಯಲಹಂಕದ, ಭಾರತೀಯ ವಾಯು ಪಡೆಯ ವಾಯು ನೆಲೆಯಲ್ಲಿ, ಯುದ್ಧ ವಿಮಾನಗಳ ವೈಮಾನಿಕ ಅಭ್ಯಾಸ ಆರಂಭಗೊಂಡಿದೆ. ಇದೇ 10 ರಿಂದ 14ರ ವರೆಗೆ ಏರ್ ಶೋ ನಡೆಯಲಿದ್ದು, ಅತ್ಯಾಧುನಿಕ ರಕ್ಷಣಾ ತಂತ್ರಜ್ಞಾನ, ರೋಮಾಂಚಕ ವೈಮಾನಿಕ ಸಾಹಸಗಳು ಮತ್ತು ಜಾಗತಿಕ ವಾಯುಯಾನ ಶ್ರೇಷ್ಠತೆಯನ್ನು ಪ್ರದರ್ಶಿಸಲಿದೆ. ಯಲಹಂಕ, ಹೆಬ್ಬಾಳ, ಅಮೃತಹಳ್ಳಿ, ಕೂಡಿಗೆಹಳ್ಳಿ ಸೇರಿದಂತೆ, ವಾಯು ನೆಲೆಯ ಸುತ್ತ ಲೋಹದ ಹಕ್ಕಿಗಳ ಹಾರಾಟ ಮತ್ತು ಸದ್ದು, ಮೈನವಿರೇಳಿಸುವಂತಿದೆ. ಸ್ವದೇಶಿ ಮತ್ತು ವಿದೇಶಿ ನಿರ್ಮಿತ ಯುದ್ಧ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳು ಈಗಾಗಲೇ ಪ್ರದರ್ಶನಕ್ಕೆ ಅಣಿಗೊಂಡಿವೆ.

ವೈಮಾನಿಕ ಪ್ರದರ್ಶನದ ಟಿಕೆಟ್ ದರ, ಬಿಸಿನೆಸ್ ಪಾಸ್‌ಗೆ, 5 ಸಾವಿರ ರೂಪಾಯಿ, ಜನರಲ್ ವಿಸಿಟರ್ ಪಾಸ್‌ಗೆ, 2 ಸಾವಿರದ 500 ರೂಪಾಯಿ ನಿಗದಿ ಪಡಿಸಲಾಗಿದೆ.

<><><>

30 ಸಾವಿರ ಹೆಕ್ಟರ್ ಮೀಸಲು ಅರಣ್ಯ ಪ್ರದೇಶವಿರುವ ಚಿಕ್ಕಮಗಳೂರು ಜಿಲ್ಲೆಯಲ್ಲಿ ಅರಣ್ಯ ಪ್ರದೇಶವನ್ನು ಬೆಂಕಿಯಿಂದ ರಕ್ಷಿಸಲು ಹಾಗೂ ಕಾರ್ಯಾಚರಣೆ ನಡೆಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಅರಣ್ಯಗಳಲ್ಲಿ ಬೆಂಕಿ ಪ್ರಕರಣಗಳನ್ನು ಪತ್ತೆ ಹಚ್ಚಲು, 31 ಜನ ಅರಣ್ಯ ವೀಕ್ಷಕರನ್ನು ನೇಮಿಸಿಕೊಳ್ಳಲಾಗಿದೆ ಎಂದು ಅರಣ್ಯ ಉಪ ಸಂರಕ್ಷಣಾಧಿಕಾರಿ ಎನ್.ರಮೇಶ ಬಾಬು ಹೇಳಿದರು. ನಗರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಡ್ರೋಣ್ ಕೆಮೆರಾಗಳನ್ನು ಬಳಸಿ ಕಾಮೇನಹಳ್ಳಿ, ಮುಳ್ಳಯ್ಯನಗಿರಿಯಂತಹ ಸೂಕ್ಷ್ಮ ಅರಣ್ಯ ಪ್ರದೇಶಗಳಲ್ಲಿ ಬೆಂಕಿ ಪತ್ತೆ ಕಾರ್ಯ ಮಾಡಲಾಗುತ್ತಿದೆ ಎಂದರು.

<><><>

ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥ ಪಡಿಸಬೇಕು ಎಂದು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜ್ಯ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳು ಹಾಗೂ ಮಕ್ಕಳಾ ರಕ್ಷಣಾ ಸೇವೆಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಬೇಟಿ ಬಚಾವೋ, ಬೇಟಿ ಪಡಾವೋ ಯೋಜನೆಯನ್ನು ಅನುಷ್ಠಾನಗೊಳಿಸಿ, ಬಾಲಕಿಯರ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..